ಕ್ಷಣ ಕ್ಷಣದ ಸುದ್ದಿಗಾಗಿ ವಿಶ್ವವಾಣಿ timely ಆ್ಯಪ್ ಡೌನ್‌ಲೋಡ್ ಮಾಡಿ

ವಿಶ್ವವಾಣಿ
ಬೆಂಗಳೂರು
vishwavani.news
12.07.2018 ಗುರುವಾರ

## ಸಮಾಚಾರ ಸಣ್ಣದಲ್ಲ

### ಭರ್ಜಿ ಚುಚ್ಚಿ ವಿದ್ಯಾರ್ಥಿ ಸಾವು

**ಬ್ಯಾಡಗಿ:** ತಾಲೂಕಿನ ಕೆರವಡಿ ಗ್ರಾಮದ ಸರಕಾರಿ ಪ್ರೌಢ ಶಾಲೆಯ ಕ್ರೀಡಾಂಗಣದಲ್ಲಿ ಮಂಗಳವಾರ ಸಂಜೆ ಭರ್ಜಿ (ಜ್ಯಾವೇಲಿಯನ್) ಎಸೆತದ ವೇಳೆ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿ



ಮಲ್ಲಿಕರಿಹಾನ್ ದಾದಾಪೀರ್ ಮೇರಾಂಜ್ (16) ಎಂಬುವನ ಕುತ್ತಿಗೆ ಭಾಗಕ್ಕೆ ಭರ್ಜಿ ಚುಚ್ಚಿ ಗಾಯವಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ. ಮಲ್ಲಿಕರಿಹಾನ್‌ನನ್ನು ಬ್ಯಾಡಗಿ ಹಾಗೂ ಹಾವೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಮೃತಪಟ್ಟಿದ್ದಾನೆ. ಈ ಕುರಿತು ಕಾಗಿನೆಲೆ ಪೊಲೀಸ್ ಠಾಣೆಯಲ್ಲಿ ಶಿಕ್ಷಕನ ನಿಷ್ಕಾಳಜಿಯಿಂದ ಈ ಘಟನೆ ಜರುಗಿದೆ ಎಂದು ಪ್ರಕರಣ ದಾಖಲಾಗಿದೆ.

### ಹೃದಯಾಘಾತದಿಂದ ಆನೆ ಸಾವು



ಮಡಿಕೇರಿ: ಕೊಡಗು ಜಿಲ್ಲೆಯ ದುಬಾರೆ ಸಾಕಾನೆ ಶಿಬಿರದಲ್ಲಿದ್ದ 52 ವರ್ಷದ ಮೈಥಿಲಿ ಆನೆ ಹೃದಯಾಘಾತದಿಂದ ಮೃತಪಟ್ಟಿದೆ. 25 ವರ್ಷಗಳ ಹಿಂದೆ ದುಬಾರೆ ಅರಣ್ಯದಲ್ಲಿ ಸೆರೆ ಸಿಕ್ಕಿದ್ದ ಮೈಥಿಲಿ, 3 ವರ್ಷದ ಹಿಂದೆ ಗಂಡು ಮರಿಗೆ ಜನ್ಮ ನೀಡಿತ್ತು. ಈ ಮರಿಗೆ ಅರಣ್ಯಾಧಿಕಾರಿಗಳು ಜನರಲ್ ಕಾರ್ಯಪ್ಪ ಎಂದು ನಾಮಕರಣ ಮಾಡಿದ್ದರು. ಮೃತಪಟ್ಟ ಮೈಥಿಲಿಯ ಮರಣೋತ್ತರ ಪರೀಕ್ಷೆಯನ್ನು ಹುಣಸೂರು ಅರಣ್ಯ ವಿಭಾಗದ ವೈದ್ಯಾಧಿಕಾರಿ ಡಾ.ಮುಜೀಬ್ ನಡೆಸಿದರು.

### ಅರಣ್ಯಾಧಿಕಾರಿ ಮನೆ ಮೇಲೆ ದಾಳಿ

**ಚಿತ್ರದುರ್ಗ:** ಆದಾಯ ಮೀರಿ ಆಸ್ತಿ ಗಳಿಕೆ ಮಾಹಿತಿ ಹಿನ್ನೆಲೆಯಲ್ಲಿ ಚಿತ್ರದುರ್ಗದ ಕೋಟೆ ರಸ್ತೆಯಲ್ಲಿರುವ ದಾವಣಗೆರೆ ಜಿಲ್ಲೆಯ ಜಗಳೂರು ಆರ್‌ಎಫ್‌ಒ ರಾಮಮೂರ್ತಿ ಮನೆ ಹಾಗೂ ಕಚೇರಿ ಮೇಲೆ ಚಿತ್ರದುರ್ಗದ ಎಸಿಬಿ ಅಧಿಕಾರಿಗಳು ಬುಧವಾರ ಬೆಳಗ್ಗೆ ದಾಳಿ ನಡೆಸಿದ್ದಾರೆ. ಜಗಳೂರು ವಲಯ ಅರಣ್ಯ ಅಧಿಕಾರಿಯಾಗಿರುವ ರಾಮಮೂರ್ತಿ ಅವರ ದಾವಣಗೆರೆ ಜಿಲ್ಲೆಯ ಜಗಳೂರು ಪಟ್ಟಣದಲ್ಲಿನ ಕಚೇರಿ, ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲೂಕಿನ ಭಕ್ತನಕಟ್ಟೆ ಗ್ರಾಮದಲ್ಲಿನ ಮನೆ, ತೋಟದ ಮೇಲೂ ದಾಳಿ ನಡೆದಿದೆ. ಆರ್‌ಎಫ್‌ಒ ರಾಮಮೂರ್ತಿ ಮಾವ ಕೆಂಚಪ್ಪ ಒಡೆತನದ ಮನೆ, ತೋಟ ಇದಾಗಿದ್ದು, ಬೇನಾಮಿ ಆಸ್ತಿ ಮಾಡಿದ್ದಾರೆ. ಏಕಕಾಲಕ್ಕೆ ಜಗಳೂರು ಕಚೇರಿ, ಚಿತ್ರದುರ್ಗದ ಮನೆ, ಭಕ್ತನಕಟ್ಟೆಯ ಮನೆ, ತೋಟದ ಮೇಲೆ ಎಸಿಬಿ ಡಿವೈಎಸ್ಪಿ ಜಿ. ಮಂಜುನಾಥ್ ನೇತೃತ್ವದ ದಾಳಿ ನಡೆಸಿದೆ. ಅಕ್ರಮ ಆಸ್ತಿ ವಿವರ: 1.50 ಲಕ್ಷ ರು. ನಗದು, 1 ಸ್ಕಾರ್ಪಿಯೋ, 1 ಬುಲೆರೋ, 1 ಬೈಕ್, 950 ಗ್ರಾಂ ಚಿನ್ನ, 600 ಗ್ರಾಂ ಬೆಳ್ಳಿ, 35 ಎಕರೆ ಜಮೀನು, 10 ನಿವೇಶನಗಳ ದಾಖಲೆಗಳನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

### ಯುವಕನ ಹತ್ಯೆ

**ದಾವಣಗೆರೆ:** ನಗರದ ಪಿಬಿ ರಸ್ತೆಯ ಪ್ರೀತಂ ಬಾರ್ ಎದುರಿನ ನಿರ್ಜನ ಪ್ರದೇಶದಲ್ಲಿ ಮಂಗಳವಾರ ತಡರಾತ್ರಿ ಯುವಕನೊಬ್ಬನನ್ನು ಸಿಮೆಂಟ್ ಇಟ್ಟಿಗೆಯಿಂದ ತಲೆ ಜಜ್ಜಿ ಭೀಕರವಾಗಿ ಹತ್ಯೆ ಮಾಡಿದ್ದಾರೆ. ವಿನೋಬ ನಗರದ ವಾಸಿ ಭರತ್(25) ಕೊಲೆಯಾದ ಯುವಕ. ಹಳೆಯ ವೈಷಮ್ಯದ ಹಿನ್ನೆಲೆ ಪರಿಚಯಸ್ಥರೇ ಈ ಕೃತ್ಯ ಎಸಗಿರುವ ಅನುಮಾನಗಳಿವೆ. ಹತ್ಯೆಯಾದ ಯುವಕನ ಶವದ ಬಳಿ ಆಧಾರ್ ಕಾರ್ಡ್ ಪತ್ತೆಯಾಗಿದೆ. ಸ್ಥಳೀಯರು ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಎಸ್‌ಪಿ ಆರ್.ಚೇತನ್, ಎಎಸ್ಪಿ ಉದೇಶ್ ಹಾಗೂ ಸಬ್ ಇನ್ಸಪೆಕ್ಟರ್ ಸಿಬ್ಬಂದಿ, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ವಿದ್ಯಾನಗರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಜನವಾಣಿ

ಇಂದಿನ ಪ್ರಶ್ನೆ

ರಾಜ್ಯ ಒಡೆಯುವ ಹೇಳಿಕೆ ನೀಡಿರುವ ಶಾಸಕ ಶ್ರೀರಾಮುಲು ವಿರುದ್ಧ ಬಿಜೆಪಿ ಹೈಕಮಾಂಡ್ ಶಿಸ್ತು ಕ್ರಮ ಜರುಗಿಸುಬೇಕೇ?

ಹಿಂದಿನ ಪ್ರಶ್ನೆ

ನೆಟ್ ಪರೀಕ್ಷೆ ವೇಳೆ ಮಹಿಳಾ ಅಭ್ಯರ್ಥಿಗಳ ತಾಳಿ,ಕಾಲುಂಗುರು ತೆಗೆಸಿದ ಬ್ರಿಗೇಡ್ ಸ್ಕೂಲ್‌ನ ಕ್ರಮ ಸರಿಯೇ?

66% 34%

9513374801

YES ಅಥವಾ NO ಎಂದು ಎಸ್‌ಎಂಎಸ್ ಮೂಲಕ ನಿಮ್ಮ ಅಭಿಪ್ರಾಯ ತಿಳಿಸಿ

## ಜಲ ಗಣತಿ

| ಜಲ ಗಣತಿ | ಕೆಆರ್‌ಎಸ್ | ಲಿಂಗನಮಕ್ಕಿ | ಸೂಪಾ (ಮೀ.) | ತುಂಗಭದ್ರಾ | ಆಲಮಟ್ಟಿ (ಮೀ.) | ನಾರಾಯಣಪುರ | ಭದ್ರಾ | ಹಾರಂಗಿ | ಹೇಮಾವತಿ | ಕಬಿನಿ | ಘಟಪ್ರಭಾ | ಮಲಪ್ರಭಾ |
|---|---|---|---|---|---|---|---|---|---|---|---|---|
| ಗರಿಷ್ಠ ಮಟ್ಟ (ಅಡಿಗಳಲ್ಲಿ) | 124.80 | 1819.0 | 1849.92 | 1633.00 | 1704.72 | 1615.00 | 2158.00 | 2859.00 | 2922.00 | 2281.28 | 2175.00 | 2079.50 |
| ಇಂದಿನ ಮಟ್ಟ (ಅಡಿಗಳಲ್ಲಿ) | 115.20 | 1783.45 | 1771.43 | 1616.83 | 1689.39 | 1603.91 | 2131.00 | 2857.45 | 2912.50 | 2282.22 | 2125.15 | 2045.30 |
| ಒಳ ಹರಿವು (ಕ್ಯೂಸೆಕ್) | 35698 | 42336 | 29524 | 0000 | 45742 | 202 | 33844 | 14973 | 20535 | 40363 | 20023 | 2122 |
| ಹೊರ ಹರಿವು (ಕ್ಯೂಸೆಕ್) | 3612 | 000 | 000 | 160 | 000 | 95 | 150 | 12388 | 3100 | 39667 | 101 | 1000 |

ಬಿಜೆಪಿಯ ಕೋಮುವಾದಿ ಪ್ರಚಾರವೇ ಸೋಲಿಗೆ ಕಾರಣ | ಲೋಕಸಭಾ ಚುನಾವಣೆಯಲ್ಲಿ 20 ಸ್ಥಾನಗಳನ್ನು ಗೆಲ್ಲುತ್ತೇವೆ: ದಿನೇಶ್ ಗುಂಡೂರಾವ್

# ನಿಷ್ಠಾವಂತ ಕಾರ್ಯಕರ್ತರ ಕೈಗೆ ಅಧಿಕಾರ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ನಮಗೆ ನಾಯಕರ ಹಿಂದೆ ಓಡಾಡುವ ಕಾರ್ಯಕರ್ತರು ಬೇಡ. ಪಕ್ಷದ ಸಂಘಟನೆಗೆ ದುಡಿಯುವ ನಿಷ್ಠಾವಂತ ಕಾರ್ಯಕರ್ತರು ಬೇಕು. ಇದಕ್ಕಾಗಿ ರಾಜ್ಯಾದ್ಯಂತ ಪ್ರವಾಸ ಮಾಡಿ ಪ್ರತಿ ಜಿಲ್ಲೆ, ತಾಲೂಕು ಹಾಗೂ ಬೂತ್ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸುವ ಮೂಲಕ ಬಿಜೆಪಿ ಮುಕ್ತ ರಾಜ್ಯವನ್ನಾಗಿಸುತ್ತೇವೆ ಎಂದು ಕೆಪಿಸಿಸಿ ನೂತನ ಅಧ್ಯಕ್ಷ ದಿನೇಶ್ ಗುಂಡೂರಾವ್ ಹಾಗೂ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ ಶಪಥ ಮಾಡಿದರು.

ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಕೆಪಿಸಿಸಿ ಅಧ್ಯಕ್ಷರಾಗಿ ಪದಗ್ರಹಣ ಮಾಡಿದ ಸಂದರ್ಭದಲ್ಲಿ ಮಾತನಾಡಿದ ದಿನೇಶ್ ಗುಂಡೂರಾವ್, ಬಿಜೆಪಿಯವರ ಅಪಪ್ರಚಾರ, ಭಾವನಾತ್ಮಕ ವಿಚಾರದ ಪ್ರಚಾರದಿಂದ ಜನ ಪ್ರೇರಿತರಾದ ಕಾರಣ ಸೋಲನುಭವಿಸುವಂತಾಯಿತು. ಆದರೆ, ಬರುವ ಲೋಕಸಭಾ ಚುನಾವಣೆಯನ್ನು ಸವಾಲಾಗಿ ಸ್ವೀಕರಿಸಿ 28 ಲೋಕಸಭಾ ಕ್ಷೇತ್ರಗಳಲ್ಲಿ 20 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಭರವಸೆ ನೀಡಿದರು.

ಈಶ್ವರ ಖಂಡ್ರೆ ಮತ್ತು ನಾನು ರಾಜ್ಯದೆಲ್ಲೆಡೆ ಓಡಾಡುತ್ತೇವೆ. ನಿಷ್ಠಾವಂತರನ್ನು ಗುರುತಿಸುತ್ತೇವೆ. ಅನೇಕರಿಗೆ ಕೆಪಿಸಿಸಿ ಗೊತ್ತಿರುವುದಿಲ್ಲ. ಕೆಪಿಸಿಸಿ ಸುತ್ತುವವರೇ ಬೇರೆ. ಇವತ್ತು ನಿಷ್ಠಾವಂತರನ್ನು ಸ್ಥಳೀಯವಾಗಿ ಗುರುತಿಸಿ ಅಧಿಕಾರ ಕೊಡುವ ಕೆಲಸ ಮಾಡುತ್ತೇನೆ. ಶಬ್ದ ಮಾಡಿಕೊಂಡು ನಾಯಕರ ಜತೆ ನಿಂತು ಸೇವೆ ಮಾಡುವವರಿಗೆ ಅವಕಾಶವಿಲ್ಲ ಎಂದು ಎಚ್ಚರಿಸಿದರು.

ಪಕ್ಷದಲ್ಲಿರುವ ನಿಷ್ಠಾವಂತ ಕಾರ್ಯಕರ್ತರನ್ನು ಗಣನೆಗೆ ತೆಗೆದುಕೊಂಡು ಪಕ್ಷ ಸಂಘಟನೆ ಮಾಡಲಾಗುವುದು. ಪ್ರಾಮಾಣಿಕವಾಗಿ ಕೆಲಸ ಮಾಡುವ ಕಾರ್ಯಕರ್ತರನ್ನು ಗುರುತಿಸಿ ಜವಾಬ್ದಾರಿ ನೀಡಲಾಗುವುದು. ನಮ್ಮ ಬಳಿ ಯಾವುದೇ ರೀತಿಯ ಅಪ್ರಮಾಣಿಕರಿಗೆ ಜಾಗವಿಲ್ಲ, ಇಂದಿನಿಂದಲೇ ಖಂಡ್ರೆಯವರೊಂದಿಗೆ ಪಕ್ಷ ಸಂಘಟನೆ ಕುರಿತು ಚರ್ಚಿಸಲಾಗುವುದು ಎಂದು ತಿಳಿಸಿದರು.

ಕಾಂಗ್ರೆಸ್ ಸರಕಾರ ಜನಸ್ನೇಹಿ, ಅಭಿವೃದ್ಧಿ ಪರ ಕಾರ್ಯಕ್ರಮಗಳನ್ನು ನೀಡಿದೆ. ಆದರೆ, ಸೂಕ್ತ ಪ್ರಚಾರದ ಕೊರತೆ ಹಾಗೂ ಬಿಜೆಪಿಯವರ ಕೋಮುವಾದಿ ಪ್ರಚಾರ ಸೋಲನುಭವಿಸಲು ಕಾರಣವಾಯಿತು. ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲುವ ವಿಶ್ವಾಸವಿತ್ತು. ಕಳೆದ ಐದು ವರ್ಷದಲ್ಲಿ ಆಗಿರುವ ಕೆಲಸ, ಅಭಿವೃದ್ಧಿ, ರಸ್ತೆ, ನೀರಾವರಿ, ಎಸ್‌ಸಿ/ಎಸ್‌ಟಿ ಸಮುದಾಯಗಳ ಶ್ರೇಯಸ್ಸಿಗೆ ಕಾರ್ಯಕ್ರಮ ಕೊಟ್ಟಿತ್ತು. ಜನ ಕಾಂಗ್ರೆಸ್ ಸರಕಾರ ಕಾರ್ಯಕ್ರಮಗಳನ್ನು ಆಧರಿಸಿ ಮತ ಹಾಕಿದ್ದರೆ 150ಕ್ಕೂ ಹೆಚ್ಚು ಸ್ಥಾನ ಗೆಲ್ಲುತ್ತಿದ್ದೆವು ಎಂದು ಬೇಸರ ವ್ಯಕ್ತಪಡಿಸಿದರು.

ಕೆಪಿಸಿಸಿ ಅಧ್ಯಕ್ಷ ಹುದ್ದೆ ಸಿಗುತ್ತದೆ ಎಂದು ಕನಸಿನಲ್ಲೂ ಅಂದುಕೊಂಡಿರಲಿಲ್ಲ. ಇಷ್ಟು ದೊಡ್ಡ ಹುದ್ದೆ ಸಿಕ್ಕಿರುವುದು ಹೆಮ್ಮೆಯ ವಿಚಾರ. ಕೆಪಿಸಿಸಿ ಅಧ್ಯಕ್ಷರಾಗುವುದು ಸುಲಭದ ಮಾತಲ್ಲ. ಅನೇಕ ದಿಗ್ಗಜರು ಈ ಹುದ್ದೆ ಅಲಂಕರಿಸಿದ್ದು ದೊಡ್ಡ ಇತಿಹಾಸ. ದೇವರಾಜ ಅರಸು, ನಿಜಲಿಂಗಪ್ಪ, ಕೃಷ್ಣ ರಂಥ ದಿಗ್ಗಜರು ನಿಭಾಯಿಸಿದ್ದಾರೆ. ಅಂತಹ ಹುದ್ದೆಯನ್ನು ಅಲಂಕರಿಸುವ ಅವಕಾಶ ಸಿಕ್ಕಿದೆ. ಇದಕ್ಕೆ ಎಲ್ಲ ಹಿರಿಯ ನಾಯಕರ ಆಶೀರ್ವಾದ ಹಾಗೂ ಕಾರ್ಯಕರ್ತರ ಸಹಕಾರ ಕಾರಣ ಎಂದರು.

ಸಂಶೋಧಕ ಎಂ.ಎಂ.ಕಲಬುರಗಿ, ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆಯ ಹಿಂದೆ ಮತೀಯ ಶಕ್ತಿ ಕೈವಾಡವಿದೆ. ಇದಕ್ಕೆ ಬಿಜೆಪಿ ನೇರ ಕಾರಣ ಎಂದು ಆರೋಪಿಸಿದ ಅವರು, ಮಂತ್ರಿ ಮಾಡಲು, ಬೋರ್ಡ್ ಅಧ್ಯಕ್ಷರನ್ನು ಮಾಡಲು ಅಧ್ಯಕ್ಷನಾಗಿಲ್ಲ. ಕಾಂಗ್ರೆಸ್ ಪಕ್ಷ ದೇಶಕ್ಕೆ ತ್ಯಾಗ ಮಾಡಿದ್ದು, ಅಧಿಕಾರಕ್ಕಾಗಿ ಅಲ್ಲ. ಈಗಿನ ಸರಕಾರದಲ್ಲೂ 80 ಸ್ಥಾನ ನಮ್ಮದೇ ಇದ್ದರೂ ಕೇವಲ 38 ಸ್ಥಾನದವರಿಗೆ ಅಧಿಕಾರ ನಡೆಸಲು ಕೊಟ್ಟಿರುವುದು ದೇಶದಲ್ಲಿ ಮತೀಯ ಶಕ್ತಿಗಳಿಗೆ ಅಧಿಕಾರ ಸಿಗಬಾರದು ಎಂಬ ಉದ್ದೇಶ'ದಿಂದ. ಇದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು ಎಂದರು.

**ಮಾರ್ಗದರ್ಶನ ನೀಡಿದ ರಾಹುಲ್:** ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ ಮಾತನಾಡಿ, ಪಕ್ಷದ ಅಧ್ಯಕ್ಷರು ನಮ್ಮ ಮೇಲಿಟ್ಟಿರುವ, ನಂಬಿಕೆ ಭರವಸೆಗೆ ಆಭಾರಿಯಾಗಿದ್ದೇವೆ. ಕಾಂಗ್ರೆಸ್ 133 ವರ್ಷಗಳ ಇತಿಹಾಸವಿರುವ ಪಕ್ಷವಾಗಿದ್ದು, ಇತ್ತೀಚೆಗೆ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಮಾರ್ಗದರ್ಶನ ಪಡೆದಿದ್ದೇವೆ. ಅವರ ಸಲಹೆಯಂತೆ ಮುಂದಿನ ಚುನಾವಣೆ ಎದುರಿಸುತ್ತೇವೆ. ವಿಧಾನಸಭಾ ಚುನಾವಣೆಯಲ್ಲಿ ಹಿನ್ನಡೆಯಾಗಿರಬಹುದು. ನಮ್ಮ ಭಾಗ್ಯ ಯೋಜನೆಗಳು ಜನಮಾನಸದಲ್ಲಿವೆ. ವಿರೋಧಿಗಳ ಷಡ್ಯಂತ್ರದಿಂದ ಸೋಲನುಭವಿಸುವಂತಾಯಿತು. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಕನಿಷ್ಠ 20 ಸ್ಥಾನ ಗೆಲ್ಲಬೇಕು. ಈ ಮೂಲಕ ರಾಜ್ಯದಲ್ಲಿ ಬಿಜೆಪಿಯನ್ನು ಬುಡಸಮೇತ ಕಿತ್ತೊಗೆಯಬೇಕು ಎಂದು ಕರೆ ನೀಡಿದರು.



ಕೆಪಿಸಿಸಿ ನೂತನ ಅಧ್ಯಕ್ಷ ದಿನೇಶ್ ಗುಂಡೂರಾವ್ ಮತ್ತು ಕಾರ್ಯಾಧ್ಯಕ್ಷರಾಗಿ ಈಶ್ವರ ಖಂಡ್ರೆ ಪದಗ್ರಹಣ ಮಾಡಿದ ಸಂದರ್ಭದಲ್ಲಿ ನೆರೆದಿದ್ದ ಕಾಂಗ್ರೆಸ್ ಪಕ್ಷದ ಘಟಾನುಘಟಿ ನಾಯಕರು.



ಸಮಾರಂಭದಲ್ಲಿ ಸೇರಿದ್ದ ಕಾಂಗ್ರೆಸ್ ಕಾರ್ಯಕರ್ತರ ದಂಡು.

### ಸಿದ್ದರಾಮಯ್ಯನವರೇ ನಮ್ಮ ನಾಯಕ

**ಈಗಲೂ ಸಿದ್ದರಾಮಯ್ಯ ಅವರೇ ನಮ್ಮ ಜನಪ್ರಿಯ ನಾಯಕರು. ಅವರು ಸೋತಿರಬಹುದು, ಕೆಲವು ದಿನ ಕಳೆಯಲಿ ಮತ್ತೆ ಜನ ಅವರ ಕಾರ್ಯಕ್ರಮವನ್ನು ನೆನಪಿಸಿಕೊಳ್ಳುತ್ತಾರೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಅವರ ಬಗ್ಗೆ ದಿನೇಶ್ ಗುಂಡೂರಾವ್ ಮೆಚ್ಚುಗೆ ವ್ಯಕ್ತಪಡಿಸಿದರು.**

### ಕಾಂಗ್ರೆಸ್ ನಾಯಕರ ಟಾರ್ಗೆಟ್!

**ದೇಶ ತಪ್ಪು ದಾರಿಗೆ ಹೋಗುತ್ತಿದೆ, ಉಸಿರು ಕಟ್ಟುವ ವಾತಾವರಣ ನಿರ್ಮಾಣವಾಗುತ್ತಿದೆ. ಐಟಿ-ಇಡಿ ದಾಳಿ ಮೂಲಕ ಕಾಂಗ್ರೆಸ್ ನಾಯಕರನ್ನು ಟಾರ್ಗೆಟ್ ಮಾಡಲಾಗುತ್ತಿದೆ. ಹೀಗಾಗಿ ಅನೇಕ ಮಾಧ್ಯಮಗಳು ಕೇಂದ್ರ ಸರಕಾರದ ವಿರುದ್ಧ ಹೇಳಲು ಭಯ ಪಡುತ್ತವೆ. ಅವರ ಮೇಲೆಯೂ ಐಟಿ, ಇಡಿ ದಾಳಿಯಾದರೆ ಎಂಬ ಭಯ ಇದೆ. ನಮ್ಮ ದೇಶ ಪ್ರಜಾಪ್ರಭುತ್ವದ ಮೂಲ ಸಿದ್ಧಾಂತ, ಜಾತ್ಯತೀತ, ಸಾಮಾಜಿಕ ನ್ಯಾಯ ಸಿದ್ಧಾಂತದಿಂದ ಬೆಳೆದಿದ್ದು. ಅದನ್ನು ಮೊಟಕುಗೊಳಿಸುವ ಪ್ರಯತ್ನ ಬಿಜೆಪಿಯಿಂದ ಆಗುತ್ತಿದೆ ಎಂದು ದಿನೇಶ್ ಗುಂಡೂರಾವ್ ಕಿಡಿಕಾರಿದರು.**

ಈ ಸಂದರ್ಭದಲ್ಲಿ ಕೆಪಿಸಿಸಿಯ ನಿರ್ಗಮಿತ ಅಧ್ಯಕ್ಷ ಡಾ. ಜಿ.ಪರಮೇಶ್ವರ ಅವರು ಪಕ್ಷದ ಧ್ವಜ ನೀಡುವ ಮೂಲಕ ದಿನೇಶ್ ಗುಂಡೂರಾವ್ ಅವರಿಗೆ ಅಧಿಕಾರ ಹಸ್ತಾಂತರಿಸಿದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ, ರಾಜ್ಯ ಚುನಾವಣಾ ಉಸ್ತುವಾರಿ ಕೆ.ಸಿ.ವೇಣುಗೋಪಾಲ್, ಮಾಜಿ ಸಚಿವ ಎಚ್.ಕೆ.ಪಾಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ, ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್, ಮಾಜಿ ಸಚಿವ ಎಂ.ಬಿ.ಪಾಟೀಲ್, ಕೇಂದ್ರದ ಮಾಜಿ ಸಚಿವ ಕೆ.ಎಚ್.ಮುನಿಯಪ್ಪ, ರಾಜ್ಯಸಭೆ ಮಾಜಿ ಉಪಸಭಾಪತಿ ರೆಹಮಾನ್ ಖಾನ್ ಇದ್ದರು.

# ಜನರಲ್ಲಿ ವ್ಯತಿರಿಕ್ತ ಜನಸಂಖ್ಯೆಯ ಅರಿವು ಮೂಡಬೇಕು: ಸಚಿವ ಶಿವಾನಂದ್ ಪಾಟೀಲ್

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಸ್ವಾತಂತ್ರ್ಯ ಪೂರ್ವದಲ್ಲಿ ಒಟ್ಟು ಜಗತ್ತಿನ ಜನಸಂಖ್ಯೆ 256 ಕೋಟಿ ಇದ್ದು, ಪ್ರಸ್ತುತ 763 ಕೋಟಿ ಗಡಿ ದಾಟಿದೆ. ದೇಶದಲ್ಲಿ 40 ಕೋಟಿ ಇದ್ದ ಜನಸಂಖ್ಯೆ ಇಂದು 110 ಕೋಟಿ ದಾಟಿದ್ದು, ಈ ವ್ಯತಿರಿಕ್ತ ಜನಸಂಖ್ಯೆ ಹೆಚ್ಚಳದ ಪರಿಣಾಮ ಕುರಿತು ಜನಸಾಮಾನ್ಯರಲ್ಲಿ ಅರಿವು ಮೂಡಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶಿವಾನಂದ್ ಎಸ್.ಪಾಟೀಲ್ ಹೇಳಿದರು.

ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಇಲಾಖೆಯಿಂದ ನಗರದ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ 'ವಿಶ್ವ ಜನಸಂಖ್ಯಾ' ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಡೀ ವಿಶ್ವವೇ ಈ ದಿನಾಚರಣೆ ಆಚರಿಸುವ ಜತೆಗೆ ವಿಶ್ವಮಟ್ಟದಲ್ಲಿ ಜನಸಂಖ್ಯಾ ನಿಯಂತ್ರಣದಲ್ಲಿ ಮಹತ್ವದ ಹೆಜ್ಜೆ ಇಡಬೇಕಿದೆ. ಅದು ಪ್ರತಿ ನಾಗರಿಕನ ಜವಾಬ್ದಾರಿಯೂ ಆಗಿದೆ ಎಂದರು.

90ರ ದಶಕದಲ್ಲಿ ಶಸ್ತ್ರಚಿಕಿತ್ಸೆ ಮೂಲಕ ಜನಸಂಖ್ಯೆ ನಿಯಂತ್ರಣಕ್ಕೆ ಮುಂದಾದ ನೂರಕ್ಕೆ 99ರಷ್ಟು ಮಹಿಳೆಯರು ಹಾಗೂ ತಜ್ಞ ವೈದ್ಯರನ್ನು (Dinocologist) ಶ್ಲಾಘಿಸಿ ಅಭಿನಂದನೆ ಸಲ್ಲಿಸಿದರು. ಇತ್ತೀಚಿನ ದಿನಗಳಲ್ಲಿ ಹೆಣ್ಣು ಮಕ್ಕಳು ಈ ಕುರಿತು ಜಾಗೃತರಾಗುತ್ತಿದ್ದಾರೆ. ಹೆಣ್ಣು ಮಕ್ಕಳನ್ನು ಪ್ರೀತಿಸುವ ಕುಟುಂಬಗಳು ಇಂದು ಹೆಚ್ಚಾಗಿವೆ ಎಂದು ಸಂತಸ ವ್ಯಕ್ತಪಡಿಸಿದರು.

**ಸಂಪನ್ಮೂಲಗಳ ಸದ್ಬಳಕೆ ಸಾಧ್ಯ:** ಇಲಾಖೆ ವ್ಯಸೆಕ್ಟಮಿ ಮೂಲಕ ಜನಸಂಖ್ಯಾ ನಿಯಂತ್ರಣಕ್ಕೆ ಮುಂದಾಗಿದ್ದು ಇದರಲ್ಲಿ ಇನ್ನೂ ಯಶಸ್ವಿಯಾಗುವ ಅನಿವಾರ್ಯತೆ ಇದೆ. ಈ ಕುರಿತು ಮಹತ್ವದ ಪಾತ್ರ ನಿರ್ವಹಿಸುತ್ತಿರುವ ಇಲಾಖೆಯಿಂದ ಇನ್ನೂ ಅನೇಕ ಜಾಗೃತಿ ಕಾರ್ಯಕ್ರಮ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.



ಎಲ್ಲ ಧರ್ಮ, ಜಾತಿ, ಜನಾಂಗದವರು ಜನಸಂಖ್ಯೆ ನಿಯಂತ್ರಿಸಿ ಸಮಾಜಕ್ಕೆ ಕೊಡುಗೆ ನೀಡಬೇಕು. ಸಂತಾನೋತ್ಪತ್ತಿ ಕಡಿಮೆಯಾದರೆ ದೇಶದಲ್ಲಿರುವ ಸಂಪನ್ಮೂಲಗಳನ್ನು ಭವಿಷ್ಯದಲ್ಲಿ ಸದ್ಬಳಕೆ ಮಾಡಿಕೊಳ್ಳಬಹುದು. ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್ ರಾಜ್ಯ ಸರಕಾರದದೊಂದಿಗೆ ರಾಜ್ಯಾದ್ಯಂತ ಜನಸಂಖ್ಯೆ ನಿಯಂತ್ರಣದ ಕುರಿತು ಜಾಗೃತಿ ಮೂಡಿಸುವ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ಗರ್ಭ ನಿರೋಧಕ ವಿಧಾನಗಳ ಸದ್ಬಳಕೆ, ಮುನ್ನೋಟ ಹಾಗೂ ಇಲಾಖೆಯ ಮುಂದಿನ ಕಾರ್ಯಯೋಜನೆಗಳ ಕುರಿತು ಚರ್ಚಿಸಲಾಯಿತು. ಕಾರ್ಯಕ್ರಮಕ್ಕೂ ಮುನ್ನ ಬೆಳಗ್ಗೆ ವಿಧಾನಸೌಧದಿಂದ ಅಂಬೇಡ್ಕರ್ ಭವನದವರೆಗೂ ಬೈಕ್ ರ‍್ಯಾಲಿ ಜಾಥಾ ನಡೆಸಲಾಯಿತು.

ರಾಷ್ಟ್ರೀಯ ಆರೋಗ್ಯ ಅಭಿಯಾನ ನಿರ್ದೇಶಕ ಡಾ.ರತನ್ ಕೇಲ್ಕರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವಾ ಆಯುಕ್ತೆ ಎಂ.ವಿ. ಸಾವಿತ್ರಿ, ನಿರ್ದೇಶಕ ಡಾ. ಎಸ್. ಪುಷ್ಪರಾಜ, ಪೋಸ್ಟ್ ಮಾಸ್ಟರ್ ಜನರಲ್ ಅರವಿಂದ ಶರ್ಮಾ, ಆಶಾ ಕಾರ್ಯಕರ್ತೆಯರು, ಕಿರಿಯ ಮಹಿಳಾ ಆರೋಗ್ಯ ಸಹಾಯಕರು, ಆರೋಗ್ಯ ಮೇಲ್ವಿಚಾರಕರು, ವೈದ್ಯಾಧಿಕಾರಿಗಳು, ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿಗಳು ಇದ್ದರು.



ತಮಿಳುನಾಡಿನ ಕುಂಭಕೋಣಂನಲ್ಲಿ ಶ್ರೀವಿಜಯಿಂದ್ರತೀರ್ಥರ ಮಧ್ಯಾರಾಧನೆಯಲ್ಲಿ ಮಂತ್ರಾಲಯ ಶ್ರೀರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿಗಳಾದ ಶ್ರೀ ಸುಭುದೇಂದ್ರತೀರ್ಥರು ವಿಜಯೀಂದ್ರತೀರ್ಥರ ಮೂಲಬೃಂದಾವನಕ್ಕೆ ಸುವರ್ಣ ಕವಚ ಸಮರ್ಪಿಸಿದರು.

# ಕೈ-ಜೆಡಿಎಸ್ ಒತ್ತಡಕ್ಕೆ ಸಿಎಂ ಮಣಿಯುವರೇ?

← ಮೊದಲಪುಟದಿಂದ

**ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲೂ ಆಕ್ರೋಶ:** ಈ ಮಧ್ಯೆ, ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ವಿಧಾನಸೌಧದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಿತು. ಈ ಸಭೆಯಲ್ಲಿ ಬಹುತೇಕ ಶಾಸಕರು ಸಮ್ಮಿಶ್ರ ಸರಕಾರ ಮಂಡಿಸಿರುವ ಬಜೆಟ್ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ವಿದ್ಯುತ್ ದರ ಹೆಚ್ಚಳ, ಪೆಟ್ರೋಲ್ ಡೀಸೆಲ್ ಮೇಲೆ ಸೆಸ್ ಹೆಚ್ಚಳ ಮಾಡುವ ಮೂಲಕ ಜನಸಾಮಾನ್ಯರ ಮೇಲೆ ಹೊರೆ ಆಗುವಂತೆ ಮಾಡಿರುವುದು, ಉತ್ತರ ಕರ್ನಾಟಕ ಸೇರಿದಂತೆ ರಾಜ್ಯದ ಬಹುತೇಕ ಭಾಗಗಳಿಗೆ ಯಾವುದೇ ಒತ್ತು ನೀಡದೆ ಪ್ರಾದೇಶಿಕ ತಾರತಮ್ಯ ಮಾಡಿರುವುದು ಸೇರಿದಂತೆ ಹಲವು ವಿಚಾರಗಳಲ್ಲಿ ಈ ಬಾರಿಯ ಬಜೆಟ್ ಕಾಂಗ್ರೆಸ್‌ಗೆ ಹಿನ್ನಡೆ ಆಗುವಂತೆ ಮಾಡಿದೆ. ಈ ಹಿಂದೆ ಕೇಂದ್ರ ಸರಕಾರ ತೈಲಬೆಲೆ ಹೆಚ್ಚಳ ಮಾಡಿದಾಗ ಹಲವು ಬಾರಿ ನಮ್ಮ ಪಕ್ಷವೇ ಬೀದಿಗಿಳಿದು ಹೋರಾಟ ನಡೆಸಿತ್ತು. ಆದರೆ, ಈಗ ಈ ಬೆಲೆಗಳನ್ನು ನಾವೇ ಪಾಲುದಾರರಾಗಿರುವ ಸರಕಾರ ಹೆಚ್ಚಳ ಮಾಡಿರುವುದರಿಂದ ಲೋಕಸಭೆ ಚುನಾವಣೆ ವೇಳೆ ಹೇಗೆ ಜನರ ಮತ ಕೇಳುವುದಾದರೂ ಹೇಗೆ? ಎಂದು ಬಹುತೇಕ ಶಾಸಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಜೆಟ್ ಮೇಲಿನ ಚರ್ಚೆಗೆ ಗುರುವಾರ ಮುಖ್ಯಮಂತ್ರಿಗಳು ಉತ್ತರ ನೀಡುವ ಸಂದರ್ಭದಲ್ಲಿ ಇಂಧನದ ಮೇಲಿನ ಸೆಸ್ ಅನ್ನು ಕೈಬಿಡುವಂತೆ ನೋಡಿಕೊಳ್ಳಬೇಕೆಂದು ಶಾಸಕರು ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಗೆ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ ಮತ್ತು ಪರಮೇಶ್ವರ್ ಅವರು, ಈ ಬಗ್ಗೆ ಮುಖ್ಯಮಂತ್ರಿಗಳ ಜತೆ ಚರ್ಚಿಸಲಾಗುವುದು ಎಂದು ಭರವಸೆ ನೀಡಿದರು ಎಂದು ತಿಳಿದುಬಂದಿದೆ.



ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಪಾಲ್ಗೊಂಡಿದ್ದ ಸಿದ್ದರಾಮಯ್ಯ, ಡಾ.ಜಿ.ಪರಮೇಶ್ವರ್, ದಿನೇಶ್ ಗುಂಡೂರಾವ್, ಜಮೀರ್‌ಅಹ್ಮದ್‌ಖಾನ್, ಕೆ.ಜೆ.ಜಾರ್ಜ್ ಮತ್ತು ಕೃಷ್ಣಬೈರೇಗೌಡ ಹಾಜರಿದ್ದರು.

# ಮಹದಾಯಿ ಅನುಷ್ಠಾನಕ್ಕೆ ಬೆಂಗಳೂರು ಚಲೋ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮಹದಾಯಿ- ಕಳಸಾ ಬಂಡೂರಿ ಯೋಜನೆ ಅನುಷ್ಠಾನಕ್ಕೆ ಹಾಗೂ ಸಂಪೂರ್ಣ ಸಾಲಮನ್ನಾಕ್ಕೆ ಒತ್ತಾಯಿಸಿ ಮಹದಾಯಿ ಹೋರಾಟಂಗಾರರು ಬುಧವಾರ ಬೆಂಗಳೂರು ಚಲೋ ನಡೆಸಿ ಮುಖ್ಯಮಂತ್ರಿ ಎಚ್.ಡಿ.ಕುಮಾ ರಸ್ವಾಮಿ ಅವರಿಗೆ ಮನವಿ ಪತ್ರ ನೀಡಿದರು.

ಇದಕ್ಕೂ ಮುನ್ನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಉತ್ತರ ಕರ್ನಾಟಕದ ರೈತ ಸಂಘದ ರಾಜ್ಯಾಧ್ಯಕ್ಷ ವಿಜಯಾನಂದ ಸ್ವಾಮಿ ಮಾತನಾಡಿ, ಕಳೆದ 1083 ದಿನಗಳಿಂದ ಮಹದಾಯಿ ಹೋರಾಟಗಾರರು ಹೋರಾಟ ನಡೆಸುತ್ತಿದ್ದಾರೆ. ಆದರೆ ಮೂರು ರಾಜಕೀಯ ಪಕ್ಷಗಳು ಮಾತ್ರ ಉತ್ತರ ಕರ್ನಾಟಕದ ಸಮಸ್ಯೆಯನ್ನು ಬಗೆಹರಿಸುವಲ್ಲಿ ವಿಫಲರಾಗಿರುವುದು ವಿಪರ್ಯಾಸವಾಗಿದೆ. ರಾಜ್ಯದಲ್ಲಿ ನೂರಾರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದರು ಸರಕಾರ ಅವರಿಗೆ ಶಾಶ್ವತ ಪರಿಹಾರ ನೀಡುವಲ್ಲಿ ವಿಫಲವಾಗಿದೆ. ಇತ್ತೀಚೆಗೆ ನಡೆದ ವಿಧಾನಸಭೆ ಚುನಾವಣೆಯಲ್ಲಿ ಎಲ್ಲ ರಾಜಕೀಯ ಪಕ್ಷಗಳು ರೈತರಿಗೆ ಭರವಸೆ ನೀಡಿ ಗದ್ದುಗೆ ಏರಿವೆ. ಮಹದಾಯಿ ಸಮಸ್ಯೆ ಬಗೆಹರಿಸುತ್ತಾರೆ ಎಂದು ನಾವು ಕಾದು ನೋಡುತ್ತಿದ್ದೇವೆ. ಆದರೆ ಯಾವುದೇ ಪ್ರಯೋಜನವಾಗಿಲ್ಲ. ಹೀಗಾಗಿ ಉತ್ತರ ಕರ್ನಾಟಕ ರೈತರು ಬೆಂಗಳೂರು ಚಲೋ ನಡೆಸಿದ್ದಾರೆ ಎಂದರು.

ಮಹದಾಯಿ-ಕಳಸಾ ಬಂಡೂರಿ ಯೋಜನೆ ಅನುಷ್ಠಾನದಲ್ಲಿ ರಾಜ್ಯ ಸರಕಾರ ನಿಲುವು ಸ್ಪಷ್ಟಪಡಿಸಬೇಕು. ಸರ್ವಪಕ್ಷ ಸಭೆ ಕರೆದು ನ್ಯಾಯಾಧೀಕರಣದಲ್ಲಿ ಸಮಸ್ಯೆ ಬಗೆಹರಿಸಲು ಎಲ್ಲರೂ ಒಟ್ಟಾಗಿ ಬೆಂಬಲಿಸಿ ಪ್ರಧಾನ ಮಂತ್ರಿಗಳ ಮನವೊಲಿಸಬೇಕು. ಸುಸ್ತಿ ಸಾಲಗಾರರಿಗೆ ಮಾತ್ರ 2 ಲಕ್ಷ ಸಾಲಮನ್ನಾ ಮಾಡಿರುವುದು ಅವೈಜ್ಞಾನಿಕವಾಗಿದೆ. ನೀವು ನೀಡಿದ ಭರವಸೆಯಂತೆ ಸಂಪೂರ್ಣ ಸಾಲಮನ್ನಾ ಮಾಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯ ಬಳಿಕ ಹೋರಾಟಗಾರರು ವಿಧಾನಸೌಧಕ್ಕೆ ತೆರಳಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ತಮ್ಮ ಮನವಿ ಪತ್ರವನ್ನು ಸಲ್ಲಿಸಿದರು.



ಮಹದಾಯಿ– ಕಳಸಾ ಬಂಡೂರಿ ಯೋಜನೆ ಅನುಷ್ಠಾನಕ್ಕೆ ಹಾಗೂ ಸಂಪೂರ್ಣ ಸಾಲಮನ್ನಾಕ್ಕೆ ಒತ್ತಾಯಿಸಿ ಮಹದಾಯಿ ಹೋರಾಟಗಾರರು ಬುಧವಾರ ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿದರು.

# ವೀರ ಯೋಧರಿಗೆ ಅಂತಿಮ ನಮನ

**ಕಾರವಾರ/ಬೆಳಗಾವಿ:** ಛತ್ತೀಸ್‌ಗಡದ ಕಾಂಕೇರ್ ಜಿಲ್ಲೆಯ ಬತ್ಸರ್ ಪ್ರದೇಶ್‌ದಲ್ಲಿ ನಕ್ಸಲರು ಹುದುಗಿಸಿಟ್ಟಿದ್ದ ನೆಲಬಾಂಬ್ ಸ್ಫೋಟದಲ್ಲಿ ಸೋಮವಾರ ಹುತಾತ್ಮರಾಗಿದ್ದ ಕಾರವಾರದ ಯೋಧ ವಿಜಯಾನಂದ ಸುರೇಶ್ ನಾಯ್ಕ(29) ಮತ್ತು ಬೆಳಗಾವಿಯ ಖಾನಾಪುರ ತಾಲೂಕಿನ ಹಲಗಾ ಗ್ರಾಮದ ಯೋಧ ಸಂತೋಷ್ ಗುರವ್ ಅವರ ಅಂತ್ಯಕ್ರಿಯೆ ಗಾಳಿಯಲ್ಲಿ 3 ಸುತ್ತು ಗುಂಡು ಹಾರಿಸುವ ಮೂಲಕ ಸಕಲ ಸರಕಾರಿ ಗೌರವಗಳೊಂದಿಗೆ ನೆರವೇರಿತು.

ಕಾರವಾರದ ಸರ್ವೋದಯ ನಗರದಲ್ಲಿರುವ ಹಿಂದೂ ರುದ್ರಭೂಮಿಯಲ್ಲಿ ವಿಜಯಾನಂದ ಸುರೇಶ್ ನಾಯ್ಕ ಮತ್ತು ಹಲಗಾ ಗ್ರಾಮದಲ್ಲಿನ ಸ್ವಂತ ಜಮೀನಿನಲ್ಲಿ ಸಂತೋಷ ಗುರವ್ ಅವರ ಅಂತ್ಯಕ್ರಿಯೆ ನಡೆಯಿತು.

ಕಾರವಾರದ ಜಿಲ್ಲಾಧಿಕಾರಿ ಎಸ್.ಎಸ್.ನಕುಲ್ ಮತ್ತು ಬೆಳಗಾವಿ ಜಿಲ್ಲಾಧಿಕಾರಿ ಎಸ್.ಜಿಯಾವುಲ್ಲಾ. ಇತರೆ ಗಣ್ಯರು, ರಾಜಕೀಯ ಮುಖಂಡರು ಅಂತಿಮ ನಮನ ಸಲ್ಲಿಸಿದರು.



ಸಂತೋಷ್ ಗುರವ್



ವಿಜಯಾನಂದ

# ಮಟ್ಟ ಹಾಕಲು ಸಂಕಲ್ಪ

← ಮೊದಲಪುಟದಿಂದ

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮಾತನಾಡಿ, ವೇಣುಗೋಪಾಲ್ ಅವರ ಮಾರ್ಗದರ್ಶನದಲ್ಲಿ ವಿಧಾನಸಭೆ ಚುನಾವಣೆ ಎದುರಿಸಿದೆವು. ಆದರೆ ಗುರಿ ಮುಟ್ಟಲಾಗಲಿಲ್ಲ. ಲೋಕಸಭೆ ಚುನಾವಣೆಯಲ್ಲಿ ಹೀಗಾಗಲು ಬಿಡುವುದಿಲ್ಲ. ದೇಶ ಅಭದ್ರತೆ ದಾರಿಯಲ್ಲಿ ಹೋಗುತ್ತಿದೆ. ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಸಾಮಾನ್ಯ ಜನ ನೋವುಣ್ಣುತ್ತಿದ್ದಾರೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ಆರ್ಥಿಕತೆಗೆ ಹಾಕಿದ್ದ ಅಡಿಪಾಯ ಅಲ್ಲಾಡುತ್ತಿದೆ. ದೇಶದ ಹಿತದೃಷ್ಟಿಯಿಂದ ಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ತಕ್ಕ ಪಾಠ ಕಲಿಸಬೇಕು ಎಂದರು.

ಮೋದಿಯವರು ಸಾಮಾನ್ಯ ಪ್ರಜೆಗೂ ನೋವಾಗುವಂತೆ ನಡೆದುಕೊಂಡಿದ್ದಾರೆ. ಬೆಲೆ ನಿಯಂತ್ರಣದಲ್ಲಿ ವಿಫಲರಾಗಿದ್ದಾರೆ. ಬಿಜೆಪಿ ನಾಯಕರು ದೇಶದಲ್ಲಿ ಕೋಮು ಪ್ರಚೋದಿಸುವ ಮಾತನಾಡುತ್ತಿದ್ದಾರೆ. ಸಂವಿಧಾನ ಬದಲಿಸುವ ಮಾತು ಅತ್ಯಂತ ಖಂಡನೀಯ. ಸಂವಿಧಾನ ಬದಲಾದರೆ ದೇಶದ ಗತಿ ಏನಾಗಬೇಕು. ಹೀಗಾಗಿ ದೇಶಕ್ಕೆ ಕಾಂಗ್ರೆಸ್ ಅನಿವಾರ್ಯವಾಗಿದೆ. ಹೆಚ್ಚು ಸ್ಥಾನ ಗೆಲ್ಲುವ ಮೂಲಕ ರಾಹುಲ್ ಗಾಂಧಿ ಅವರನ್ನು ಪ್ರಧಾನಿ ಮಾಡಬೇಕು ಎಂದರು.